

ಯರಗಟ್ಟಿ: ಸಮೀಪದ ಮುಗಳಿಹಾಳ ಗ್ರಾಮದಲ್ಲಿ ತೀವ್ರ ಬರಗಾಲ ಆವರಿಸಿರುವುದರಿಂದ ಬೆಳೆಗಳು ನಷ್ಟವಾಗಿ ಜೀವನ ನಡೆಸುವುದೇ ಕಷ್ಟವಾಗಿದೆ. ಆದ್ದರಿಂದ ಉದ್ಯೋಗ ಖಾತ್ರಿ ಯೋಜನೆಯಡಿ ದುಡಿಯುವ ಕೈಗಳಿಗೆ ಕೆಲಸ ಕೊಡಬೇಕೆಂದು ಆಗ್ರಹಿಸಿ ಮೆಳ್ಳಿಕೇರಿ ಗ್ರಾಮದ ಕೂಲಿ ಕಾರ್ಮಿಕರು, ಆಲ್ ಇಂಡಿಯಾ ಕೃಷಿ ಖೇತ್ ಮಜ್ದೂರ್ ಸಂಘಟನೆ (ಎಐಕೆಕೆಎಂಎಸ್) ನೇತೃತ್ವದಲ್ಲಿ ಮುಗಳಿಹಾಳ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.ಮಾನವ ದಿನಗಳನ್ನು 200ಕ್ಕೆ ಹೆಚ್ಚಿಸಬೇಕು ಮತ್ತು ಕೂಲಿಯನ್ನು 600 ರೂಪಾಯಿಗಳಿಗೆ ಹೆಚ್ಚಿಸಬೇಕು ಎಂದು ಅವರು ಒತ್ತಾಯಿಸಿದರು.ಈ ಸಂದರ್ಭದಲ್ಲಿ ಲಕ್ಷ್ಮಣ ಇಟ್ನಾಳ, ವಿಠ್ಠಲ ನಾಯ್ಕರ, ತಾಯವ್ವ ಇಟ್ನಾಳ, ಜೀಜಾಬಾಯಿ ಬಿಜ್ಜನ್ನವರ, ಕರೆಪ್ಪ ಬಾವಿಕಟ್ಟಿ, ತಾಯವ್ವ ಇಟ್ನಾಳ, ಕಲ್ಲವ್ವ ಬಾವಿಕಟ್ಟಿ ಮುಂತಾದವರು ಇದ್ದರು.

# ಕಲಗೌಡ ಪಾಟೀಲ ಇವರ ಹುಟ್ಟುಹಬ್ಬ ಆಚರಣೆ



ಯಮಕನಮರಡಿ:– ಹುಕ್ಕೇರಿ ಗ್ರಾಮೀಣ ವಿದ್ಯುತ ಸಂಘದ ಅಧ್ಯಕ್ಷರಾದ ಕಲಗೌಡ ಪಾಟೀಲ ಇವರ 44ನೇ ಹುಟ್ಟುಹಬ್ಬವನ್ನು ಅಭಿಮಾನಗಳು ಸಂಭ್ರಮದಿಂದ ಆಚರಿಸಿದರು. ಈ ವೇಳೆಯಲ್ಲಿ ಕಲಗೌಡ ಪಾಟೀಲ ಇವರ ಅಭಿಮಾನಗಳಾದ ಅಡಿವೆಪ್ಪಾ ಬಾಗೇವಾಡಿ, ಸಿದ್ದು ಚೌಗಲಾ, ಆನಂದ ಸನದಿ, ಬಸಗೌಡ ಪಾಟೀಲ, ಲಗಮಣ್ಣಾ ಲಂಕೆನ್ನವರ, ಪರಸಪ್ಪ ಪನಗುದ್ದಿ, ಸಿದ್ದಪ್ಪಾ ಪಾಟೀಲ, ಕಲ್ಲಪ್ಪ ನಾಯಿಕ, ಮೊದಲಾದವರು ಕೇಕ ಕತ್ತರಿಸಿ ಪರಸ್ಪರ ಸಿಹಿ ಹಂಚಿ ಹುಟ್ಟಹಬ್ಬ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಭುವನೇಶ್ವರಿ ಉತ್ಸವ ಸಂಘದವರಿಂದ ಮಹಿಳಾ ದಿನಾಚರಣೆ

ಬೆಳಗಾವಿ 14–ನಗರದ ಶ್ರೀ ಭುವನೇಶ್ವರಿ ಉತ್ಸವ ಸಂಘದವರು ಇದೇ ದಿ. 17 ರವಿವಾರದಂದು ಮ. 3 ಗಂಟೆಗೆ ಹಿಂದವಾಡಿ ವಿದ್ಯಾಪೀಠ ಹತ್ತಿರವಿರುವ ಐ.ಎಂ.ಇ.ಆರ್ ಸಭಾಭವನದಲ್ಲಿ ಮಹಿಳಾ ದಿನಾಚರಣೆಯನ್ನು ಹಮ್ಮಿಕೊಂಡಿದ್ದಾರೆ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕರಾದ ಶ್ರೀಮತಿ ವಿದ್ಯಾವತಿ ಭಜಂತ್ರಿಯವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಮಹಿಳಾಗೋಷ್ಠಿಯಲ್ಲಿ ಶ್ರೇಷ್ಠ ವಾಗ್ಮಿ ಡಾ. ಮೈತ್ರಾಯಿಣಿ ಗದಿಗೆಪ್ಪಗೌಡರ (ಸ್ತ್ರೀ ಸ್ವಾಂತಂತ್ರ್ಯ), ಖ್ಯಾತ ಸಾಹಿತಿಗಳಾದ ಡಾ. ಗುರುದೇವಿ ಹುಲೆಪ್ಪನವಮಠ (ವೃದ್ಧರ ಅಂತಿಮ ಕಾಲ ಸುಖಕರವಾಗಿವೆಯೇ?), ಶ್ರೀಮತಿ ಬನಾ ಕೌಜಲಗಿ (ಹೆಚ್ಚುತ್ತಿರುವ ವಿವಾದ ವಿಚ್ಛೇದನಗಳು ಮತ್ತು ಮಹಿಳಾ ಕಾನೂನು ದುರ್ಬಳಿಕೆ) ವಿಷಗಳ ಕುರಿತಂತೆ ಮಾತನಾಡಲಿದ್ದಾರೆ.

ಪಾರಂಪರಿಕ ಕೌದಿ ಹಾಗೂ ಕಸೂತಿ ಕಲಾವಿದೆ ಶ್ರೀಮತಿ ಶಾರವ್ವಾ ಶಿವಪುತ್ರ ದಾರೋಜಿ ಸನ್ಮಾನವಿದೆ. ವಿವಿಧ ಮಹಿಳಾ ಮಂಡಳದ ಕಲಾವಿದರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು, ವೇಷಭೂಷಣ ಕಲಾಪ್ರಸ್ತುತಿ ಜರುಗಲಿವೆ.

# ಗ್ಯಾರಂಟಿ ಅನುಷ್ಠಾನಕ್ಕೆ ಸದಸ್ಯರ ನೇಮಕ

ಯರಗಟ್ಟಿ : ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕಾಗಿ ತಾಲೂಕು ಮಟ್ಟದ ಸಮಿತಿಗಳಿಗೆ ಅಧ್ಯಕ್ಷರು ಮತ್ತು ಸದಸ್ಯರನ್ನು ನೇಮಿಸಿ ಜಿಲ್ಲಾಧಿಕಾರಿ ನತೇಶ ಪಾಟೀಲ ಆದೇಶ ಹೊರಡಿಸಿದ್ದಾರೆ. ಯರಗಟ್ಟಿ ತಾಲೂಕಿಗೆ ಗೋಪಾಲ ದಳವಾಯಿ ಅಧ್ಯಕ್ಷರಾಗಿದ್ದು, ಪ. ಪಂ. ಮುಖ್ಯಾಧಿಕಾರಿ ಡಿ. ಎನ್. ತಹಶೀಲ್ದಾರ ಕಾರ್ಯದರ್ಶಿಯಾಗಿರುತ್ತಾರೆ. ಸದಸ್ಯರಾಗಿ ಮಂಜುನಾಥ ಹಾದಿಮನಿ, ವಿಠ್ಠಲ ಮಳಗಲಿ, ನಜೀರಸಾಬ ನದಾಫ, ವಿಕ್ರಮ ಇಂಗಳೆ, ಬಿಸ್ಮಿಲ್ಲಾ ಮುಲ್ಲಾ, ಗಿಡ್ಡಪ್ಪ ಕ್ಯಾಮನಕಟ್ಟಿ, ಬಸವರಾಜ ಪುಜೇರ, ಲಕ್ಷ್ಮಣ ಕರಗೋಳಿ, ರಾಘವೇಂದ್ರ ಗಿಡಮುನ್ನವರ, ಮುತ್ತಣ್ಣ ಹೊನ್ನಪ್ಪನಾಯ್ಕರ, ಶ್ರೀಮತಿ ಸಾವಿತ್ರಿ ಗೌಡರ, ಹನಮಂತ ಭಜಂತ್ರಿ, ಫಕ್ಕೀರಪ್ಪ ಬಸಿಡೋಣಿ ನೇಮಕವಾಗಿದ್ದಾರೆ

# ಹೆಲ್ಮೆಟ್ ಕಡ್ಡಾಯ ಜಾಗೃತಿ ಅಭಿಯಾನ



ಯರಗಟ್ಟಿ: ಸಮೀಪದ ಗುಡುಮಕೇರಿ ಗ್ರಾಮದಲ್ಲಿ ಮುರಗೋಡ ಪೊಲೀಸ್ ಠಾಣೆಯಿಂದ ದ್ವಿಚಕ್ರ ವಾಹನಗಳ ಅಪಘಾತ ಹೆಚ್ಚಾಗಿದ್ದು ಅದರಿಂದ ರಕ್ಷಿಸಿಕೊಳ್ಳಲು ದಿನಾಂಕ 25 ನವ್ಹಂಬರ್ 2023 ರಿಂದ ಹೆಲ್ಮೆಟ್ ಕಡ್ಡಾಯ ಮಾಡಲಾಗಿದ್ದು.

ಸಾರ್ವಜನಿಕರು ನಿಯಮ ಪಾಲಿಸದಿದ್ದರೆ ಅಂತವರ ವಾಹನ ಜಪ್ತಿ ಮಾಡಿ ಪರಿಶೀಲನೆಗೆ ಒಳಪಡಿಸಲಾಗುವುದೆಂದು ಎಂದು ಯರಗಟ್ಟಿ ಪಿಎ???ಐ ಆಯ್. ಎಂ. ಹಿರೇಗೌಡರ ಸಾರ್ವಜನಿಕರಿಗೆ ಎಚ್ಚರಿಕೆ ನೀಡಿದರು.

# ಬೇಸಿಗೆಯಲ್ಲಿ ಆರೋಗ್ಯ ರಕ್ಷಣೆಗೆ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಲಹೆ

ಕೊಪ್ಪಳ, ಮಾರ್ಚ್ 15 : ಪ್ರಸ್ತುತ ಹಾಗೂ ಮುಂಬರುವ ಬೇಸಿಗೆ ದಿನಗಳಲ್ಲಿ ಸೂರ್ಯನ ಶಾಖ ದಿನದಿಂದ ದಿನಕ್ಕೆ ಹೆಚ್ಚಾಗುವ ಹಿನ್ನಲೆಯಲ್ಲಿ ಹೀಟ್ ವೇವ್ (ಶಾಖದ ಹೊಡೆತ) ಹೀಟ್ ವೇವ್ ಸ್ಟ್ರೋಕ್ ನಿಂದಾಗಿ ಸಾರ್ವಜನಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆಯಿರುವುದರಿಂದ ಮುಂಜಾಗ್ರತಾ ಕ್ರಮವಾಗಿ ಎಲ್ಲಾ ಸಾರ್ವಜನಕರು ತಮ್ಮ ಆರೋಗ್ಯ ಕಾಪಾಡಿಕೊಳ್ಳುಲು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಕೆಲವು ಸಲಹೆಗಳನ್ನು ನೀಡಿದೆ.

ಸಾರ್ವಜನಕರು ಬಿಸಿಲು ದಿನಗಳಲ್ಲಿ ಕೊಡೆ (ಛತ್ರಿ) ಬಳಸಿರಿ ಹಾಗೂ ಸಾಧ್ಯವಾದಷ್ಟು ತಂಪಾದ ಸ್ಥಳಗಳಲ್ಲಿ ಉಳಿಯಲು ಪ್ರಯತ್ನಸಿ. ತೆಳುವಾದ ಸಡಿಲವಾದ ಹತ್ತಿಯ ಉಡುಪುಗಳನ್ನು ಧರಿಸಿ, ಆದಷ್ಟು ಬಿಳಿ ಬಣ್ಣದ ಬಟ್ಟೆಗಳ ಬಳಕೆ ಒಳ್ಳಯದು. ಹತ್ತಿಯ ಅಥವಾ ಟರ್ಬನ್ ಟೋಪಿ ಹಾಗೂ ಕೂಲಿಂಗ್ ಗ್ಲಾಸ್ ಧರಿಸಿರಿ. ಹಿರಿಯ ನಾಗರಿಕರಿಗೆ ಮಕ್ಕಳಿಗೆ ಹೆಚ್ಚು ನೀರು ಕುಡಿಯುಲು ಕೊಡಬೇಕು. ಬೆಳ್ಳಿಗೆ 11 ರಿಂದ ಸಂಜೆ 4 ರವರೆಗೆ ಹೊರಾಂಗಣ ದೈಹಿಕ ಚಟುವಟಿಕೆಯನ್ನು ಕಡಿಮೆ ಮಾಡಲು ಪ್ರಯತ್ನಿಸಿ.

ಸಾಕಷ್ಟು ನೀರು ಕುಡಿಯಿರಿ. ಮಜ್ಜಿಗೆ ಮತ್ತು ಗ್ಲೂಕೋಸ್ ಅಥವಾ ಓ.ಆರ್.ಎಸ್ ನಂತಹ ದ್ರವ ಪದಾರ್ಥಗಳನ್ನು ಹೆಚ್ಚು ಉಪಯೋಗಿಸಿ. ಕೊಠಡಿಯ ತಾಪಮಾನವನ್ನು ಕಡಿಮೆ ಮಾಡಲು ಕಿಟಕಿ, ಛಾಯೆಗಳನ್ನು ಬಳಸಿ. ಫ್ಯಾನ್ ಬಳಕೆದಂತಹ ಸೂಕ್ತ ಕ್ರಮುಗಳನ್ನು ತೆಗೆದುಕೊಳ್ಳಿ. ಹೀಟ್ ಸ್ಟ್ರೋಕ್ ಲಕ್ಷಣಗಳನ್ನು ಹೊಂದಿರುವ ವ್ಯಕ್ತಿಯನ್ನು ತಂಪಾದ ಜಾಗಕ್ಕೆ ಸ್ಥಳಾಂತರಿಸಿ. ಶಾಖದ ಹೊಡೆತದಿಂದ ಬಳಲುತ್ತಿರುವ ವ್ಯಕ್ತಿಯು ಕನಿಷ್ಠ ಬಟ್ಟೆಯನ್ನು ಹೊಂದಿರುವಂತೆ ನೋಡಿಕೊಂಡು, ವ್ಯಕ್ತಿಗೆ ತಣ್ಣೀರಿನಿಂದ ಸ್ಪಾಂಜ್ ಮಾಡಬೇಕು ಅಥವಾ ಐಸ್ ಪ್ಯಾಕ್ಗಳನ್ನು ಉಪಯೋಗಿಸಬಹುದು ಅಥವಾ ವ್ಯಕ್ತಿಯನ್ನು ಐಸ್ ಬ್ಲಾಕ್ ಗಳ ಮಧ್ಯ ಇಡಬಹುದು. ಹೀಟ್ ವೇವ್ ಸ್ಟ್ರೋಕ್ ಗೆ ಒಳಗಾದ ವ್ಯಕ್ತಿಗೆ ಯಾವುದೇ ಸುಧಾರಣೆ ಕಂಡುಬರದಿದ್ದರೆ, ಅವರನ್ನು ತಕ್ಷಣ ಆಸ್ಪತ್ರೆಗೆ ಸ್ಥಳಾಂತರಿಸಬೇಕು.

ಬೇಸಿಗೆಯಲ್ಲಿ ಹೊರಗಿನಿಂದ ಬಂದ ತಕ್ಷಣ ನೀರು, ಓ.ಆರ್.ಎಸ್ ಅಥವಾ ಮಜ್ಜಿಗೆಯಂತಹ ಪಾನೀಯಗಳನ್ನು ಬಳಸಬಹುದು. ತುರ್ತು ಸೇವೆಗೆ ಶುಲ್ಕ ರಹಿತ ಸಹಾಯವಾಣಿ ಸಂಖ್ಯೆ 108 & 102 ಗೆ ಸಂಪರ್ಕಿಸಬಹುದ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# "ಗ್ರಾಹಕ ಮಿತ್ರ" ಸರಣಿ ಉಪನ್ಯಾಸ ಮಾಲಿಕೆ

ಬೆಳಗಾವಿ. ಗ್ರಾಹಕರಿಗೆ ಸಿಗಬೇಕಾದ ಹಕ್ಕುಗಳ ಬಗ್ಗೆ ಅರಿವು ಮೂಡಿಸಿ ಪ್ರತಿಯೊಬ್ಬ ಗ್ರಾಹಕನು ಗೌರವ ಯುತ ಜೀವನ ನಿರ್ವಹಿಸಲು ಸಜ್ಜುಗೊಳಿಸುವ ಉದ್ದೇಶದಿಂದ ನಮ್ಮೂರ ಬಾನುಲಿ ಸಮುದಾಯ ರೇಡಿಯೋ ಕೇಂದ್ರ ವಿಶ್ವ ಗ್ರಾಹಕರ ದಿನಾಚರಣೆ ಸಂದರ್ಭದಲ್ಲಿ ಪ್ರಾರಂಭಿಸಿರುವ "ಗ್ರಾಹಕ ಮಿತ್ರ" ಸರಣಿ ಉಪನ್ಯಾಸ ಮಾಲಿಕೆ ಗ್ರಾಹಕ ಜಾಗೃತಿ ಮೂಡಿಸುವಲ್ಲಿ ಪ್ರಮುಖ ಪಾತ್ರವಹಿಸಲಿದೆ ಎಂದು ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರ ಇಲಾಖೆ ಬೆಳಗಾವಿಯ ಜಂಟಿ ನಿರ್ದೇಶಕ, ಶ್ರೀ ಶ್ರೀಶೈಲ್ ಕಂಕಣವಾಡಿ ಅಭಿಪ್ರಾಯ ಪಟ್ಟರು. ಜಿಲ್ಲಾ ಗ್ರಾಹಕ ಮಾಹಿತಿ ಕೇಂದ್ರದ ಸಂಯೋಜಕ ಎಂ. ಎಂ. ಗಡಗಲಿ ಮಾತನಾಡಿ ವಿವಿಧ ಗ್ರಾಹಕ ವಿಳಯಗಳಾದ ಹಕ್ಕುಗಳು, ಕರ್ತವ್ಯಗಳು, ಗುಣಮಟ್ಟದ ಅರಿವು, ತಪ್ಪು ಜಾಹಿರಾತುಗಳು, ದೂರು ನೀಡುವ ಬಗ್ಗೆ, ರಶೀದಿ ಬೇಡಿಕೆ, ಮುಂತಾದವುಗಳ ಬಗ್ಗೆ "ಗ್ರಾಹಕ ಮಿತ್ರ" ಉಪನ್ಯಾಸ ಮಾಲಿಕೆ ಬಿತ್ತರಿಸಲಿದೆ ಎಂದರು. ಮಹಿಳಾ ಕಲ್ಯಾಣ ಸಂಸ್ಥೆಯ ಸಂಯೋಜಕ ಎಂ.ಎಸ್.ಚೌಗಲಾ, ಆರ್ ಜೆ ಚೇತನ್, ಆರ್ ಜೆ ಮೀರಾ ಭಾಗವಹಿಸಿದ್ದರು.

# ಬೆಳಗಾವಿಯ ನಗರದಲ್ಲಿ ಮತ್ತೆ ಕಳ್ಳರ ಅಟ್ಟಹಾಸ

ಬೆಳಗಾವಿ.: ವಡ್ಗಾಂವ್, ಸಮೃದ್ಧಿ ಕಾಲೋನಿ, ಪಾರಿಜಾತ ಕಾಲೋನಿ ಮತ್ತು ಆನಂದನಗರ ಪ್ರದೇಶದಲ್ಲಿ ಅನುಮಾನಾಸ್ಪದ ಯುವಕನೊಬ್ಬ ಮಧ್ಯರಾತ್ರಿ 1 ಗಂಟೆಗೆ ಮತ್ತೆ ವಾಕಿಂಗ್ ಮಾಡುತ್ತಿರುವುದು ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ ಅವನು ಬೀದಿಯಲ್ಲಿ ನಡೆದು ಗೇಟ್ ತೆರೆದು ಮನೆಯೊಳಗೆ ಪ್ರವೇಶಿಸಲು ಪ್ರಯತ್ನಿಸುತ್ತಿರುವಂತೆ ತೋರುತ್ತದೆ ಪೊಲೀಸ್ ಇಲಾಖೆ ಸಮಯಕ್ಕೆ ಸರಿಯಾಗಿ ಇತ್ತ ಗಮನಹರಿಸಿ ಸಾರ್ವಜನಕರಿಗೆ ಭದ್ರತೆ ಒದಗಿಸಬೇಕು ಎಂಬುದು ಈ ಭಾಗದ ನಾಗರಿಕರ ಜನರ ಆಗ್ರಹವಾಗಿದೆ.

# ಶಿನೋಳಿ: ಸಾಂಪ್ರದಾಯಿಕ ಪೂಜೆಯಲ್ಲಿ ಪಾಲ್ಗೊಂಡ ಸಚಿವೆ ಲಕ್ಷ್ಮೀ ಹೆಬ್ಬಾಳಕರ್



ಚಂದಗಡ: ಚಂದಗಡ್ ತಾಲೂಕಿನ ಶಿನೋಳಿ ಗ್ರಾಮದಲ್ಲಿ ಮೇ ತಿಂಗಳಿನಲ್ಲಿ ನಡೆಯಲಿರುವ ಶ್ರೀ ಮಹಾಲಕ್ಷ್ಮಿ ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಅಲ್ಲಿನ ಗ್ರಾಮಸ್ಥರ ಆಹ್ವಾನದ ಮೇರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಶುಕ್ರವಾರ ಗ್ರಾಮಕ್ಕೆ ಭೇಟಿ ಕೊಟ್ಟು ಅಲ್ಲಿನ ಸಂಪ್ರದಾಯದ ಪ್ರಕಾರ ಪೂಜೆಯಲ್ಲಿ ಭಾಗವಹಿಸಿದರು.

ಮೇ ತಿಂಗಳಿನಲ್ಲಿ ಜಾತ್ರೆ ಜರುಗಲಿದ್ದು, ಗ್ರಾಮದಲ್ಲಿ ದೇವಿಗೆ ಶುಕ್ರವಾರ ಪೂಜೆ ಹಮ್ಮಿಕೊಳ್ಳಲಾಗಿತ್ತು, ಜಾತ್ರೆಯ ಆರಂಭಕ್ಕೂ ಮುನ್ನ ಪಾಲಿಸಲಾಗುವ ಪ್ರಮುಖ ಸಂಪ್ರದಾಯದ ಪೂಜೆ ಇದಾಗಿದೆ. ಇದೇ ಸಮಯದಲ್ಲಿ ಗ್ರಾಮಸ್ಥರ ಸನ್ಮಾನವನ್ನು ಸ್ವೀಕರಿಸಿ, ಜಾತ್ರಾ ಮಹೋತ್ಸವಕ್ಕೆ ಸಚಿವರು ಶುಭ ಕೋರಿದರು.

ಕಾರ್ಯಕ್ರಮದಲ್ಲಿ ಯುವರಾಜ ಕದಂ, ಯುವ ಕಾಂಗ್ರೆಸ್ ಮುಖಂಡ ಮೃಣಾಲ ಹೆಬ್ಬಾಳಕರ್, ಚಂದ್ರಕಲಾ ಬಾಮುಚೆ, ಡಾ. ಐಶ್ವರ್ಯ ಪಾಟೀಲ, ದೀಪಕ್ ಪಾಟೀಲ, ನತಿನ್ ಪಾಟೀಲ, ಬಾಬು ಪಾಟೀಲ, ಶ್ಯಾಮಜಿ ಸುತಾರ್, ವಿನೋದ್ ಪಾಟೀಲ, ಅಮೃತ್ ಮಿನಸೆ, ಶಿರಪತಿ ಗೋಡೆಕರ್, ಶಂಕರ್ ಪಾಟೀಲ, ಜ್ಯೋತಿಬಾ ಪಾಟೀಲ, ಮಹಾದೇವ್ ಗುಂಜಿಕರ್, ರಾಜೇಶ್ ಪಾಟೀಲ, ಅರುಣ ಸುತಾರ್, ಪರಶುರಾಮ್ ಪಾಟೀಲ ಇದ್ದರು.

# ಹೆಸ್ಕಾಂ ಕಚೇರಿ ಇಂದು ಗ್ರಾಹಕರ ಕುಂದುಕೊರತೆ ಸಭೆ

ಧಾರವಾಡ ಮಾರ್ಚ್.14: ಮಾರ್ಚ್ 16, 2024 ರಂದು ಮಧ್ಯಾಹ್ನ 3 ಗಂಟೆಗೆ ಶಹರ ಉಪ ವಿಭಾಗ–2 ವಿಜಯಾ ರಸ್ತೆ, ಹೆಸ್ಕಾಂ, ಕಛೇರಿಯಲ್ಲಿ ಗ್ರಾಹಕರ ಕುಂದುಕೊರತೆಗಳ ಸಭೆಯನ್ನು ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರು(ವಿ), ಕಾರ್ಯ ಮತ್ತು ಪಾಲನೆ ಉಪ ವಿಭಾಗ–2 ಹೆಸ್ಕಾಂ, ಧಾರವಾಡ ಇವರು ಅಧ್ಯಕ್ಷತೆಯಲ್ಲಿ ಕರೆಯಲಾಗಿದೆ. ಶಹರ ಉಪ ವಿಭಾಗ–2, ವ್ಯಾಪ್ತಿಯಲ್ಲಿ ಬರುವ ವಿದ್ಯುತ್ ಗ್ರಾಹಕರು ಸದರ ಸಭೆಗೆ ಹಾಜರಾಗಿ ಸದುಪಯೋಗ ಪಡೆದುಕೊಂಡು ತಮ್ಮ ವಿದ್ಯುತ್ ಬಗ್ಗೆ ಇದ್ದ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬಹುದು ಎಂದು ಹೆಸ್ಕಾಂ ಶಹರ ಉಪವಿಭಾಗ 2 ರ ಸಹಾಯಕ ಕಾರ್ಯನಿರ್ವಾಹಕ ಇಂಜೀನಿಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹುಲಕೋಟಿ ನೂತನ ಬಸ್ ನಿಲ್ದಾಣದ ಉದ್ಘಾಟನಾ ಸಮಾರಂಭ

ಗದಗ ಮಾರ್ಚ 15: ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಗದಗ ವಿಭಾಗದಿಂದ ಹುಲಕೋಟಿ ನೂತನ ಬಸ್ ನಿಲ್ದಾಣದ ಉದ್ಘಾಟನಾ ಸಮಾರಂಭವು ಹುಲಕೋಟಿ ಬಸ್ ನಿಲ್ದಾಣದಲ್ಲಿ ಮಾರ್ಚ 16 ರಂದು ಬೆಳಿಗ್ಗೆ 10 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಕಾರ್ಯಕ್ರಮ ಉದ್ಘಾಟಿಸುವರು. ರಾಜ್ಯದ ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ.ಪಾಟೀಲ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಸರ್ಕಾರದ ಮುಖ್ಯ ಸಚೇತಕರು ಹಾಗೂ ಕರ್ನಾಟಕ ವಿಧಾನ ಪರಿಷತ್ ಶಾಸಕರಾದ ಸಲೀಂ ಅಹ್ಮದ್ , ವಾಕರಸಾ ಸಂಸ್ಥೆ ಅಧ್ಯಕ್ಷರು ಹಾಗೂ ಕಾಗವಾಡ ಶಾಸಕರಾದ ಭರಮಗೌಡ ಕಾಗೆ, ಖನಿಜ ಅಭಿವೃದ್ಧಿ ನಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ, ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿದಾನ ಪರಿಷತ್ ಶಾಸಕ 'ರುಗಳಾದ ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ , ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಹುಲಕೋಟಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶ್ರೀಮತಿ ನಾಗರತ್ನ ಬಾಳಿಹಳ್ಳಿಮಠ, ಹುಲಕೋಟಿ ಗ್ರಾಮ ಪಂಚಾಯತಿ ಉಪಾಧ್ಯಕ್ಷರಾದ ಅಬ್ದುಲ್ ಕರೀಂಸಾಬ ತಹಶೀಲ್ದಾರ ಆಗಮಿಸುವರು.

ವಿಶೇಷ ಆಹ್ವಾನತರಾಗಿ ಕ.ರಾ.ರ.ಸಾ. ನಗಮದ ವ್ಯವಸ್ಥಾಪಕ ನಿರ್ದೇಶಕರಾದ ಅನ್ಬುಕುಮಾರ್ , ಸಾರಿಗೆ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ.ಎನ್.ವಿ. ಪ್ರಸಾದ, ಜಿಲ್ಲಾಧಿಕಾರಿ ಶ್ರೀಮತಿ ವೈಶಾಲಿ ಎಂ.ಎಲ್, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಎಸ್.ಬಿ.ಶೆಟ್ಟೆಣ್ಣವರ, ವಾ.ಕ.ರ.ಸಾ.ನಗಮದ ವ್ಯವಸ್ಥಾಪಕ ನಿರ್ದೇಶಕ ಭರತ್ ಎಸ್, ಬೆಂಗಳೂರು ಮಹಾನಗರ ಸಾರಿಗೆ ನಗಮದ ವ್ಯವಸ್ಥಾಪಕ ನಿರ್ದೇಶಕ ರಾಮಚಂದ್ರನ್ ಆರ್, ಜಿಲ್ಲಾ ಪೊಲೀಸ ವರಿಷ್ಟಾಧಿಕಾರಿ ಬಾಬಾಸಾಬ ನೇಮಗೌಡ, ಕಲ್ಯಾಣ ಕ.ರ.ಸಾರಿಗೆ ನಗಮದ ವ್ಯವಸ್ಥಾಪಕ ನಿರ್ದೇಶಕರಾದ ಎಂ.ರಾಚಪ್ಪ ಅವರು ಆಗಮಿಸುವರು.

ವಾ.ಕ.ರ.ಸಾ.ಸಂಸ್ಥೆಯ ಗದಗ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿ ಡಿ.ಎಂ.ದೇವರಾಜ, ವಾ.ಕ.ರ.ಸಾ.ಸಂಸ್ಥೆಯ ಮುಖ್ಯ ಕಾಮಗಾರಿ ಅಭಿಯಂತರರಾದ ದಿವಾಕರ ಯರಗೊಪ್ಪ ಸರ್ವರಿಗೂ ಸ್ವಾಗತ ಕೋರಿದ್ದಾರೆ. ವಾ.ಕ.ರ.ಸಾ.ಸಂಸ್ಥೆಯ ಮುಖ್ಯ ಕಾಮಗಾರಿ ಅಭಿಯಂತರರಾದ ದಿವಾಕರ ಯರಗೊಪ್ಪ ಸರ್ವರಿಗೂ ಸ್ವಾಗತ ಕೋರಿದ್ದಾರೆ.

## ಬಡವರ ಹಸಿವು ನೀಗಿಸುತ್ತಿರುವ ಗ್ಯಾರಂಟಿ ಯೋಜನೆಗಳು : ಲಕ್ಷ್ಮೀ ಹೆಬ್ಬಾಳಕರ್

# ಕಾಂಗ್ರೆಸ್ ಪಕ್ಷದಿಂದ ಮಾತ್ರ ಅಭಿವೃದ್ಧಿ



ಸವದತ್ತಿ (ಬೆಳಗಾವಿ):* ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸಾರಥ್ಯದ ಕಾಂಗ್ರೆಸ್ ಸರ್ಕಾರ ಸರ್ವ ಜನಾಂಗದ ಅಭಿವೃದ್ಧಿಗೆ ಶ್ರಮಿಸುತ್ತಿದ್ದು, ಶ್ರಮಿಕರ ಅಭಿವೃದ್ಧಿಗಾಗಿ ಜಾರಿಗೆ ತರಲಾಗಿರುವ ಪಂಚ ಗ್ಯಾರಂಟಿ ಯೋಜನೆಗಳ ಉದ್ದೇಶ ಯಶಸ್ವಿಯಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ.

ಬೆಳಗಾವಿ ಜಿಲ್ಲೆಯ ಸವದತ್ತಿಯ ತಾಲೂಕು ಗುರು ಭವನದಲ್ಲಿ ಶುಕ್ರವಾರ ನಡೆದ ಗ್ಯಾರಂಟಿ ಯೋಜನೆಗಳ ಸಮಾವೇಶದಲ್ಲಿ ಮಾತನಾಡಿದ ಸಚಿವರು, ಚುನಾವಣಾ ಪೂರ್ವದಲ್ಲಿ ಕಾಂಗ್ರೆಸ್ ಕೊಟ್ಟ ಮಾತಿನಂತೆ ಅಧಿಕಾರಕ್ಕೆ ಬಂದ ಕೇವಲ 100 ದಿನಗಳಲ್ಲಿ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ನುಡಿದಂತೆ ನಡೆದಿದೆ ಎಂದರು.

ಕೊರೋನಾ ಮಾರಿಯಿಂದ ಸಂಕಷ್ಟಕ್ಕೆ ಸಿಲುಕಿದ್ದ ಜನರು ಬೆಲೆ ಏರಿಕೆಯಿಂದಾಗಿ ತತ್ತರಿಸಿದ್ದರು. ಇಂಥ ಜನರ ಅನುಕೂಲಕ್ಕಾಗಿ ಕಾಂಗ್ರೆಸ್ ಪಕ್ಷ ಪಂಚ ಗ್ಯಾರಂಟಿಗಳನ್ನು ಘೋಷಿಸಿತ್ತು. ಪಕ್ಷಾತೀತವಾಗಿ, ಯಾವುದೇ ಭೇದಭಾವ ಇಲ್ಲದೆ, ಮಧ್ಯವರ್ತಿಗಳ ಹಾವಳಿ ಇಲ್ಲದೆ ನಮ್ಮ ಗ್ಯಾರಂಟಿ ಯೋಜನೆಗಳು ಜನರಿಗೆ ತಲುಪುತ್ತಿವೆ ಎಂದು ಸಚಿವರು ಹೇಳಿದರು.

ಜನರ ನೆಮ್ಮದಿಗಾಗಿ ಕಾರ್ಯರೂಪಕ್ಕೆ ತರಲಾದ ಈ ಯೋಜನೆಗಳು ಇಂದು ಮನೆ ಮನೆಗೆ ತಲುಪಿವೆ. ಸರ್ಕಾರ ಜಾರಿಗೆ ತಂದ ಯೋಜನೆಗಳಿಂದ ಕೂಲಿ ಕಾರ್ಮಿಕರು, ಕಡು ಬಡವರಿಗೆ ಅನುಕೂಲವಾಗಿದೆ ಎಂದು ಹೇಳಿದರು.

ಸವದತ್ತಿ ಯಲ್ಲಮ್ಮ ಹಾಗೂ ನನ್ನ ತಂದೆತಾಯಿಗಳ ಆಶೀರ್ವಾದ, ಬೆಳಗಾವಿ ಗ್ರಾಮೀಣ ಕ್ಷೇತ್ರದ ಜನತೆಯ ಬೆಂಬಲದಿಂದಾಗಿ ಇಂದು ಸಚಿವೆಯಾಗಿರುವೆ. ವಾರ್ಷಿಕ 34 ಸಾವಿರ ಕೋಟಿ ಬಜೆಟ್ ಇರುವ ಗೃಹಲಕ್ಷ್ಮಿ ಯೋಜನೆಯನ್ನು ಜಾರಿಗೆ ತರುವ ಅದೃಷ್ಟ ನನ್ನ ಪಾಲಿಗೆ ಬಂತು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು. ಸವದತ್ತಿ ಕ್ಷೇತ್ರಕ್ಕೆ ಗೃಹಲಕ್ಷ್ಮಿ ಯೋಜನೆಗಾಗಿ ತಿಂಗಳಿಗೆ 15.99 ಕೋಟಿ ರೂಪಾಯಿ ನೀಡಲಾಗ್ತಿದೆ. ಒಂದು ವರ್ಷ ವರ್ಷಕ್ಕೆ 192 ಕೋಟಿ ನೀಡಲಾಗುತ್ತದೆ. ಐದು ವರ್ಷಕ್ಕೆ ಸಾವಿರ ಕೋಟಿಗಿಂತ ಹೆಚ್ಚು ಆಗುತ್ತದೆ. ಬಡವರಿಗಾಗಿ ಸಿದ್ದರಾಮಯ್ಯ ಇಂಥ ಉಪಯುಕ್ತ ಯೋಜನೆಯನ್ನು ಜಾರಿಗೆ ತಂದಿದ್ದಾರೆ. ಮೋದಿ, ಬಿಜೆಪಿಯವರು ಮಾಡದಂತ ಕೆಲಸವನ್ನು ಸಿದ್ದರಾಮಯ್ಯ ಮಾಡಿ ತೋರಿಸಿದ್ದಾರೆ ಎಂದು ಹೇಳಿದರು.

ಮೋದಿ ಯಾವುದೇ ಕಾರ್ಯಕ್ರಮಗಳನ್ನು ಮಾಡಿದರೂ ಅಂಬಾನಿ, ಅದಾನಿಯಂತ ಶ್ರೀಮಂತರಿಗಾಗಿ ಮಾತ್ರ ಮಾಡುತ್ತಾರೆ. ಕಾಂಗ್ರೆಸ್ ಪಕ್ಷದ ಸಿದ್ದರಾಮಯ್ಯ, ಲಕ್ಷ್ಮೀ ಹೆಬ್ಬಾಳ್ಕರ್ ಯಾವುದೇ ಯೋಜನೆಗಳನ್ನು ಜಾರಿಗೆ ತಂದರೂ ರೈತರಿಗೆ, ಬಡವರಿಗಾಗಿ ಮಾತ್ರ. ಅಭಿವೃದ್ಧಿ ಕೆಲಸಗಳು ಕೇವಲ ಕಾಂಗ್ರೆಸ್ ಪಕ್ಷದಿಂದ ಮಾತ್ರ ಸಾಧ್ಯ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು. ಕಾಂಗ್ರೆಸ್ ಸರ್ಕಾರ ಇರುವವರೆಗೂ ನಮ್ಮ ಯೋಜನೆಗಳು ನಿಲ್ಲುವುದಿಲ್ಲ. ಬಿಜೆಪಿಯವರು ಯೋಜನೆಗಳ ಬಗ್ಗೆ ಅನಾವಶ್ಯಕವಾಗಿ ಅಪಪ್ರಚಾರ ಮಾಡುತ್ತಿದ್ದಾರೆ. ಇಂಥ ಊಹಾಪೋಹಗಳಿಗೆ ಕಿವಿಗೊಡದೆ ಸರ್ಕಾರವನ್ನು ಮುಂದಿನ ದಿನಗಳಲ್ಲೂ ಆಶೀರ್ವದಿಸಿ ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಈ ಭಾಗದ ಶಾಸಕರಾದ ವಿಶ್ವಾಸ್ ವೈದ್ಯ, ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ ಹಟ್ಟಿಹೊಳಿ ಮೊದಲಾದವರು ಮಾತನಾಡಿದರು. ಯುವ ಕಾಂಗ್ರೆಸ್ ಮುಖಂಡ ಮೃಣಾಲ್ ಹೆಬ್ಬಾಳ್ಕರ್, ತಹಶಿಲ್ದಾರ್ ಮಧುಸೂದನ್ ಕುಲಕರ್ಣಿ, ತಾಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಯಶವಂತಕುಮಾರ್, ಬೈಲಹೊಂಗಲ ಎ.ಸಿ. ಪ್ರಭಾವತಿ, ಸಿಡಿಪಿಓ ಸುನಿತಾ, ಆರ್.ವಿ.ಪಾಟೀಲ, ಡಿ ಡಿ ಟೋಪೋಜಿ, ಮಲ್ಲು ಜಕಾತಿ, ಉಮೇಶ ಬಾಳಿ, ಚಂದು ಜಂಬಳಿ, ಮಹಾರಾಜಗೌಡ ಪಾಟೀಲ, ರಾಮನಗೌಡ ತಿಪ್ಪರಾಶಿ, ತಾಲೂಕಿನ ಫಲಾನುಭವಿಗಳು ಉಪಸ್ಥಿತರಿದ್ದರು.

GADI KANNADIGA,kannada daily, printed, published , edited, & woned by murugesh b.shivapuji ,printed ,plot no:12,sy no:174/3b,press colony,kuvempu nagar, post:hindalaga-591108,Tq & Dt:belgaum, And published at plot no:12,sy no:174/3b,press colony,kuvempu nagar,post:hindalaga-591108,Tq & Dt:belgaum, karnataka, RNI NO:KAR KAN/2003/10452. Permission to post at Belagavi, Kacheri post office Belagavi. No:PMG/KA/NK/BM/743/24-26